ಸಕಲೇಶಪುರದಲ್ಲಿ ಮಿನಿ ವಿಧಾನಸೌಧ

2041 - ಶ್ರೀ ಬಿ. ಬಿ. ಶಿವಪ್ಪ (ಸಕಲೇಶಪುರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸಕಲೇಶಪುರದಲ್ಲಿ ಮಿನಿ ವಿಧಾನಸೌಧ ಕಟ್ಟಲು ಸರ್ಕಾರವು ನಿರ್ಧರಿಸಿದೆಯೆ?*

ಆ) *ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು?*

ಇ) *ಸಕಲೇಶಪುರ ತಾಲ್ಲೂಕು ಕೇಂದ್ರವಾಗಿದ್ದು ಕಛೇರಿಗಳು ಬೇರೆ ಬೇರೆ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು ಸ್ಥಳದ ಅಭಾವದಿಂದ ಕೆಲವು ಕಛೇರಿಗಳು ಸಮರ್ಪಕವಾಗಿ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತಿಲ್ಲದಿರುವುದರಿಂದ ಪೂರ್ಣ ಪ್ರಮಾಣದ ಸ್ಥಳಾವಕಾಶ ಕಲ್ಪಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೆ?*

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಕಾಮಗಾರಿಗಳಿಗೆ ಬಿಡುಗಡೆ ಹಣ ಕುರಿತು

2042 - ಶ್ರೀ ಬಿ. ಬಿ. ಶಿವಪ್ಪ (ಸಕಲೇಶಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1995-96, 1996-97ನೇ ಸಾಲಿನಲ್ಲಿ ಸಕಲೇಶಪುರ, ಆಲೂರು ಕ್ಷೇತ್ರದಲ್ಲಿ ಶಾಸಕರ ಅನುದಾನದಲ್ಲಿ ಬಿಡುಗಡೆ ಮಾಡಿರುವ ಮೊತ್ತವೆಷ್ಟು?*

ಆ) *ಸದರಿ ಕ್ಷೇತ್ರದಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳು ಯಾವುವು?(ತಾಲ್ಲೂಕುವಾರು ವಿವರ ಕೊಡುವುದು)*

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಶಾಸಕರ ಅನುದಾನದಡಿಯಲ್ಲಿ ಬಿಡುಗಡೆ ಮಾಡಿರುವ ಅನುದಾನ

1. 1995-96 ರೂ.18.50 ಲಕ್ಷಗಳು
2. 1996-97 ರೂ. 9.50 ಲಕ್ಷಗಳು

ಆ) ತಾಲ್ಲೂಕುವಾರು ವಿವರ ಅನುಬಂಧ 1ರಲ್ಲಿ ನೀಡಿದೆ.